ಎನ್.ಸಿ.ಎಲ್.ಪಿ. ಯೋಜನೆಯಡಿಯಲ್ಲಿ ಮಂಜೂರಾಗಿದ್ದ ಶಾಲೆಗಳು ಜಿಲ್ಲೆಯಾಗಿ ಪರಿವರ್ತನೆಯ ನಂತರವು ಮುಂದುವರಿಯುತ್ತಿದೆ.

ಆ) ಪ್ರಶ್ನೆ ಒಂದಕ್ಕೆ ಉತ್ತರಿಸಿರುವಂತೆ ಹಾಲಿ ರಾಮನಗರ ತಾಲ್ಲೂಕಿನಲ್ಲಿ 06 ರಾಷ್ಟ್ರೀಯ ಬಾಲ ಕಾರ್ಮಿಕ ವಿಶೇಷ ಶಾಲೆಗಳು ನಡೆಯುತ್ತಿದೆ. ಮತ್ತು 290 ಬಾಲ ಕಾರ್ಮಿಕರಿಗೆ ಈ ಶಾಲೆಗಳಲ್ಲಿ ಪುನರ್ವಸತಿ ಕಲ್ಪಿಸಲಾಗಿದೆ.

1200 ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ತಾಲ್ಲೂಕಿನ ಮಂಠಾಳ ಗ್ರಾಮದಲ್ಲಿ ಇರುವ ಸಾರ್ವಜನಿಕ ಆರೋಗ್ಯ ಘಟಕ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಆರೋಗ್ಯ ಘಟಕವನ್ನು ಈ ಭಾಗದ ಜನಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಇ) ಹಾಗಿಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ಅಂತಹ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ.

ಇ) ಪ್ರಸ್ತಾವನೆ ನಿರ್ದೇಶನಾಲಯದ ಹಂತದಲ್ಲಿ ಪರಿಶೀಲನೆಯಲ್ಲಿದೆ.

ಬಸವ ಕಲ್ಯಾಣ ಮತಕ್ಷೇತ್ರಕ್ಕೆ ಶಾದಿಮಹಲ್ ಮಂಜೂರು ಕುರಿತು

1201 ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ) (ಎಂ.ಎಲ್.ಎ) ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಇರುವ ಶಾದಿಮಹಲ್‌ಗಳ ಸಂಖ್ಯೆ ಎಷ್ಟು;

ಆ) ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಶಾದಿಮಹಲ್‌ಗಳನ್ನು ನಿರ್ಮಿಸಲು ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಇ) ಹಾಗಿಲ್ಲದಿದ್ದಲ್ಲಿ ಕಾರಣವೇನು;

ಈ) ಈ ಭಾಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಲ್ಪಸಂಖ್ಯಾತರಿದ್ದು, ಇವರ ಅನುಕೂಲಕ್ಕಾಗಿ ಈ ಕ್ಷೇತ್ರದಲ್ಲಿ ಶಾದಿಮಹಲ್‌ಗಳನ್ನು ನಿರ್ಮಿಸಲಾಗುವುದೇ?

ಶ್ರೀ ಪ್ರೊ.ಡಾ. ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಬಸವಕಲ್ಯಾಣ ಮತ ಕ್ಷೇತ್ರದ ಬಸವಕಲ್ಯಾಣ ಎಂಬಲ್ಲಿ ಒಂದು ಶಾದಿಮಹಲ್ ಇದೆ.

ಆ) ಇಲ್ಲ.

ಇ) ಕಾರಣ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಈ) ಸೂಕ್ತ ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಿ ಪರಿಗಣಿಸಲಾಗುವುದು.

ಬಸವ ಕಲ್ಯಾಣಕ್ಕೆ ವಕ್ಫ್ ಅನುದಾನ

1202 ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ) (ಎಂ.ಎಲ್.ಎ) ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಮತಕ್ಷೇತ್ರದಿಂದ ವಕ್ಫ್ ಅನುದಾನವನ್ನು ಕೋರಿ ಮಂಡಳಿಗೆ ಕಳೆದ ಎರಡು ವರ್ಷಗಳ ಅವಧಿಯಲ್ಲಿ ಬಂದಿರುವ ಪ್ರಸ್ತಾವನೆಗಳು ಎಷ್ಟು;

ಆ) ಈ ಪೈಕಿ ಇಲ್ಲಿಯವರೆಗೆ ಎಷ್ಟು ಪ್ರಸ್ತಾವನೆಗೆ ಮಂಜೂರಾತಿ ದೊರೆತಿದೆ ಮತ್ತು ಇಲ್ಲಿಯವರೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; (ಪೂರ್ಣ ವಿವರಗಳನ್ನು ಸಂಸ್ಥೆವಾರು ಒದಗಿಸುವುದು)?

ಶ್ರೀ ಪ್ರೊ.ಡಾ. ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಬಸವಕಲ್ಯಾಣ ಮತಕ್ಷೇತ್ರದಿಂದ ವಕ್ಫ್ ಅನುದಾನವನ್ನು ಕೋರಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ 23 ಪ್ರಸ್ತಾವನೆಗಳು ಬಂದಿರುತ್ತವೆ.

ಆ) ಈ ಪೈಕಿ ನಾಲ್ಕು ಪ್ರಸ್ತಾವನೆಗಳಿಗೆ ಒಟ್ಟು ರೂ. 2.00 ಲಕ್ಷಗಳನ್ನು ಸರ್ಕಾರದಿಂದ ಮಂಜೂರಾತಿ ಆಗಿರುತ್ತದೆ ಹಾಗೂ ಇದರ ಪೈಕಿ ರೂ. 1,50,000/–ಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ವಿವರ ಈ ಕೆಳಗಿನಂತಿದೆ.

1) ದೇಸಿ ದರ್ಗ ತೋಹಳ ಗ್ರಾಮ, ಬಸವಕಲ್ಯಾಣ ಈ ಸಂಸ್ಥೆಗೆ ರೂ.50,000/–ಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

2) ಕೊಹಿನೂರು ಪಹಾಡ್, ಬಸವಕಲ್ಯಾಣ ತಾಲ್ಲೂಕು, ಈ ಸಂಸ್ಥೆಗೆ ರೂ.50,000/– ಬಿಡುಗಡೆ ಮಾಡಲಾಗಿದೆ.